# ಮಾಸ ಭವಿಷ್ಯ

-ಅರುಣ ಪಿ. ಭಟ್



**ಮೇಷ:** ತಿಂಗಳ ಆರಂಭದಲ್ಲಿ ಕಾರ್ಯಸಿದ್ಧಿ. ಬಂಧುಗಳ ಆಗಮನದಿಂದ ಕುಟುಂಬದಲ್ಲಿ ಸಂತಸ. ಮನೆ ಬಾಡಿಗೆಯಿಂದ ಧನಲಾಭ. ರಾಜಕೀಯದವರಿಗೆ ಅಧಿಕಾರ ಕೈತಪ್ಪಿ ಹೋಗುವ ಸಂಭವ. ಗ್ರಂಥರಚನೆಯಲ್ಲಿ ಆಸಕ್ತಿ. ವಾಹನ ಸೌಖ್ಯ, ಮಕ್ಕಳಿಂದ ಮಾನಸಿಕ ಕಿರಿಕಿರಿ. ಶುಭ: 6, 18, 22. ಅಶುಭ: 10, 15, 25.



**ವೃಷಭ:** ತಿಂಗಳ ಪ್ರಾರಂಭದಲ್ಲಿ ಪ್ರವಾಸದಿಂದ ಗೃಹಾಗಮನ. ಸಹೋದರಿಯರಿಂದ ಶುಭವಾರ್ತೆ. ತಿಂಗಳ ಮಧ್ಯದಲ್ಲಿ ಜ್ವರಪೀಡೆ– ವೈದ್ಯಕೀಯ ಖರ್ಚು. ಕೋರ್ಟ್ ಪ್ರಕರಣದಲ್ಲಿ ಗೆಲುವು ಸಾಧ್ಯತೆ. ಅವಮಾನಕರ ಪ್ರಸಂಗ. ವಿವಾಹ ಪ್ರಸ್ತಾವದಲ್ಲಿ ಯಶಸ್ಸು. ಶುಭ:12, 20, 29. ಅಶುಭ: 11, 21, 25.



**ಮಿಥುನ:** ದೈಹಿಕ ಜಾಡ್ಯ ಅಲರ್ಜಿ. ವಿನಾಕಾರಣ ಹೆದರಿಕೆ. ಆದರೆ ಬಹುದಿನಗಳ ನಂತರ ಕುಟುಂಬದಲ್ಲಿ ಸಂತೋಷದ ಸಮಾರಂಭ. ಕಲಾವಿದರು ಮತ್ತು ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಯಶಸ್ಸು. ಶುಭ: 14, 19, 22. ಅಶುಭ.: 12, 17, 23.



**ಕರ್ಕ:** ಮನೆಕಟ್ಟುವ ಸಮಸ್ಯೆ ಬಗೆಹರಿಯುವುದು. ಕ್ರಯ–ವಿಕ್ರಯದಲ್ಲಿ ವಂಚನೆ ಸಾಧ್ಯತೆ, ಜಾಗ್ರತೆ. ತಿಂಗಳಿಡೀ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುವಿರಿ. ತಂದೆಯಿಂದ ಹಣಕಾಸಿನ ಸಹಾಯ ಸಾಧ್ಯತೆ. ಕಾಲಿಗೆ ನೋವು. ಆಸ್ಪತ್ರೆಗೆ ಖರ್ಚು. ನಿರೀಕ್ಷಿತ ಸ್ಪರ್ಧೆಯಲ್ಲಿ ಯಶಸ್ಸು. ಶುಭ: 8, 16, 24. ಅಶುಭ: 12, 18, 26.



**ಸಿಂಹ:** ಶಾರೀರಿಕ ಮಾನಸಿಕ ಉತ್ಸಾಹ ವೃದ್ಧಿ. ಸರ್ಕಾರಿ ಕೆಲಸಗಳು ತ್ವರಿತಗತಿಯಲ್ಲಿ ನಡೆಯುವುದು. ಪರಿಚಿತ ಸ್ತ್ರೀ ವಿರೋಧ ಕಾಣಿಸುವುದು. ಹೊಟ್ಟೆನೋವಿನ ಪ್ರಸಂಗ. ಮಹತ್ವದ ಮಾತುಕತೆ. ತಿಂಗಳ ಕೊನೆಯಲ್ಲಿ ಮನೆಗೆ ಆಪ್ತರ ಆಗಮನ. ಸಂತಸದ ವಾತಾವರಣ. ಶುಭ: 14, 18, 23. ಅಶುಭ: 12, 16, 26.



**ಕನ್ಯಾ:** ಅನಿರೀಕ್ಷಿತ ಖರ್ಚಿನ ಪ್ರಸಂಗ. ಸರ್ಕಾರಿ ಕೆಲಸದಲ್ಲಿ ವ್ಯತ್ಯಯ. ಸೇವಕರಿಂದ ಹಾನಿ, ತೊಂದರೆ. ಬಂಧುಗಳಿಗೆ ಆಪತ್ತು. ಮನೆಕೆಲಸ ಅರ್ಧಕ್ಕೆ ನಿಲ್ಲುವುದು. ವ್ಯಾಪಾರಿಗಳಿಗೆ ಉದ್ದಿಮೆದಾರರಿಗೆ ಮಿಶ್ರ ಫಲ. ವಿದ್ಯಾರ್ಥಿಗಳಿಗೆ ಶುಭ. ಅವಿವಾಹಿತರಿಗೆ ವಿವಾಹ ಭಾಗ್ಯ. ಶುಭ: 16, 22, 26. ಅಶುಭ: 11, 21, 27.



**ತುಲಾ:** ಉತ್ತಮ ಫಲ ಪ್ರಾಪ್ತಿಯ ರಾಶಿ. ಆಕಸ್ಮಿಕ ಧನಲಾಭ. ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವುದು. ಸಂತತಿ ಇಲ್ಲದವರಿಗೆ ಸಂತತಿಯ ಸೂಚನೆ. ಮನೆಕೆಲಸಕ್ಕೆ ಹೊಸ ಸೇವಕರು ಸಿಗುವರು. ವ್ಯಾಪಾರದಲ್ಲಿ ಲಾಭ. ಕುಟುಂಬ ಸೌಖ್ಯ. ಶುಭ: 14, 18, 21. ಅಶುಭ: 15, 19, 27.



**ವೃಶ್ಚಿಕ:** ಕಷ್ಟದಲ್ಲೂ ಇಷ್ಟ ಫಲ ಪ್ರಾಪ್ತಿಯಾಗುವುದು. ಪರದೇಶ ಪ್ರವಾಸಕ್ಕೆ ಸಿದ್ಧತೆ ನಡೆಯುವುದು. ಸರ್ಕಾರಿ ಅಧಿಕಾರ ಪ್ರಾಪ್ತಿಯೋಗ. ಶಿಕ್ಷಕರಿಗೆ ಪದೋನ್ನತಿಯೊಡನೆ ವರ್ಗಾವಣೆ ಸಂಭವ. ಕುಟುಂಬ ವರ್ಗದಲ್ಲಿ ಅನಾರೋಗ್ಯ. ಪ್ರಾಣಾಪಾಯ ಭೀತಿ. ಶುಭ: 16, 18, 20. ಅಶುಭ.: 12, 11, 27.




**ಧನು:** ಆರೋಗ್ಯದಲ್ಲಿ ಏರುಪೇರು. ಹೆಂಡತಿಯೊಡನೆ ಜಗಳ. ಕಚೇರಿ ಕಾಗದ ಪತ್ರಗಳು ಹಠಾತ್ ಕಾಣೆಯಾಗುವಿಕೆ. ದೂರದಿಂದ ಶುಭವಾರ್ತೆ ಬರುವುದು. ದೈನಂದಿನ ಕೆಲಸಗಳು ಸರಾಗ. ದಿಢೀರ್ ಹಿರಿಯ ಅಧಿಕಾರಿಗಳ ಆಗಮನ. ಶುಭ: 12, 16, 28. ಅಶುಭ: 17, 19, 22.



**ಮಕರ:** ವಾಹನ ಚಲಾಯಿಸುವಾಗ ಎಚ್ಚರಿಕೆ ಇರಲಿ. ಕಾಲು ನೋವಿನ ಸಮಸ್ಯೆ. ಕೌಟುಂಬಿಕ ಖರ್ಚು ಜಾಸ್ತಿಯಾಗುವುದು. ಶತ್ರುಗಳು ತಲೆ ತಗ್ಗಿಸುವರು. ಹಳೆಯ ಮಿತ್ರರ ಆಗಮನ. ಮಕ್ಕಳಿಂದ ಶುಭವಾರ್ತೆ. ದಾಂಪತ್ಯ ಸೌಖ್ಯ. ಹಣಕಾಸಿನ ಲಭ್ಯತೆ. ಶುಭ: 14, 16, 21. ಅಶುಭ: 15, 19, 24.



**ಕುಂಭ:** ಪ್ರಾರಂಭದಿಂದಲೂ ಶುಭಯೋಗ. ಯಾಂತ್ರಿಕ ವಸ್ತುಗಳ ಖರೀದಿ. ಶೈಕ್ಷಣಿಕ ಕೆಲಸದಲ್ಲಿರುವವರಿಗೆ ತಾತ್ಕಾಲಿಕ ಬಡ್ತಿ. ಬ್ಯಾಂಕ್ ನೌಕರರಿಗೆ ವರ್ಗಾವಣೆ ಸಂಭವ. ಮಿತ್ರರಿಂದ ವಂಚನೆ ಸಂಭವ. ಮಕ್ಕಳ ಅನಾರೋಗ್ಯ. ಶುಭ: 13, 19, 20. ಅಶುಭ.: 14, 16, 25.



**ಮೀನ:** ವಿನಾಕಾರಣ ಮಿತ್ರರು ಶತ್ರುಗಳಾಗುವರು. ಮೇಲಧಿಕಾರಿಗಳಿಂದ ನೋಟಿಸ್ ಬರಬಹುದು. ಕಲಾವಿದರಿಗೆ ತಿಂಗಳ ಮೊದಲರ್ಧ ಉತ್ತಮ. ಸೊಂಟನೋವು ಕಾಣಿಸುವುದು. ಮಕ್ಕಳ ಆರೋಗ್ಯದಲ್ಲಿ ಕೊಂಚ ಪ್ರಗತಿ. ವಾಹನ ಚಾಲಕರಿಗೆ ಎಚ್ಚರ ಅಗತ್ಯ. ಶುಭ: 4, 10, 21. ಅಶುಭ: 12, 22, 27.